ಬೆಳಗಾವಿ ಜಿಲ್ಲೆಯಲ್ಲಿರುವ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ

ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಅನುಮತಿ ನೀಡುವುದು

3554 (3491) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಅವಕಾಶ ಮಾಡಿಕೊಡಲಾಗುವುದೆಂಬ ಸಂಗತಿ ನಿಜವೇ;

ಆ) ಹಾಗಿದ್ದಲ್ಲಿ, ಯಾವ ಯಾವ ಮೆಡಿಕಲ್ ಕಾಲೇಜುಗಳಿಗೆ ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ನಡೆಸಲು ಕೊಡಬೇಕೆಂದು ನಿರ್ಣಯಿಸಲಾಗಿದೆ;

ಇ) ಬೆಳಗಾವಿ ಜಿಲ್ಲೆಯಲ್ಲಿ ಯಾವ ಯಾವ ಸ್ಥಳಗಳಲ್ಲಿರುವ ಎಷ್ಟು ಎಷ್ಟು ಪ್ರಾಥಮಿಕ ಆರೋಗ್ಯ ಕೇಂದ್ರಗಳನ್ನು ಖಾಸಗಿ ಮೆಡಿಕಲ್ ಕಾಲೇಜಿನವರಿಗೆ ನಡೆಸಲು ಕೊಡಬೇಕೆಂದು ನಿರ್ಣಯಿಸಲಾಗಿದೆ;

ಈ) ಬೈಲಹೊಂಗಲ ತಾಲ್ಲೂಕಿನ ನೇಸರಗಿ ಗ್ರಾಮದಲ್ಲಿರುವ ಹೆರಿಗೆ ಆಸ್ಪತ್ರೆಯನ್ನು ಖಾಸಗಿ ಮೆಡಿಕಲ್ ಕಾಲೇಜಿನವರು ನಡೆಸಲು ಅನುಮತಿ ನೀಡಲಾಗುವುದೇ?

ಶ್ರೀ ಕಾಗೋಡು ತಿಮ್ಮಪ್ಪ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು):

ಅ) ಹೌದು

ಆ)

1.	ಆದಿಚುಂಚನಗಿರಿ ವೈದ್ಯಕೀಯ ಮಹಾವಿದ್ಯಾಲಯ ಮಂಡ್ಯ ಜಿಲ್ಲೆ	1 ಪ್ರಾಆಕೇ
2.	ವೈದೇಹಿ ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರ, ಬೆಂಗಳೂರು	1 ಪ್ರಾಆಕೇ
3.	ಜಗದ್ಗುರು ಶ್ರೀ ಶಿವರಾತ್ರೀಶ್ವರ ವೈದ್ಯಕೀಯ ಮಹಾವಿದ್ಯಾಲಯ ಮೈಸೂರು	2 ಪ್ರಾಆಕೇ
4.	ಖಾಜಾ ಬಂದಾ ನವಾಜ್ ವೈದ್ಯಕೀಯ ಮಹಾವಿದ್ಯಾಲಯ, ಗುಲ್ಬರ್ಗ	1 ಪ್ರಾಆಕೇ
5.	ಸಿದ್ಧಾರ್ಥ ವೈದ್ಯಕೀಯ ಮಹಾವಿದ್ಯಾಲಯ, ತುಮಕೂರು	3 ಪ್ರಾಆಕೇ
6.	ರಾಮಯ್ಯ ವೈದ್ಯಕೀಯ ಮಹಾವಿದ್ಯಾಲಯ, ಬೆಂಗಳೂರು	1 ಪ್ರಾಆಕೇ
7.	ಫಾದರ್ ಮುಲ್ಲರ್ ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು	3 ಪ್ರಾಆಕೇ
8.	ಕೆ.ಎಸ್.ಹೆಗ್ಗಡೆ, ವೈದ್ಯಕೀಯ ಮಹಾವಿದ್ಯಾಲಯ, ಮಂಗಳೂರು	1 ಪ್ರಾಆಕೇ

ಇ) ಯಾವ ಕಾಲೇಜಿನಿಂದಲೂ ಈ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ.

ಈ) ಇನ್ನೂ ಯಾವ ಕಾಲೇಜಿನಿಂದಲೂ ಈ ಬಗ್ಗೆ ಪ್ರಸ್ತಾವನೆ ಬಂದಿರುವುದಿಲ್ಲ.

ರಾಜ್ಯದಲ್ಲಿ ಹೊಸ ಆಯುರ್ವೇದಿಕ್ ಆಸ್ಪತ್ರೆಗಳನ್ನು ತೆರೆಯುವುದು

3555 (3492) ಶ್ರೀ ಕೌಜಲಗಿ ಮಹಾಂತೇಶ್ ಶಿವಾನಂದ (ಬೈಲಹೊಂಗಲ) : ಮಾನ್ಯ ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಎಷ್ಟು ಹೊಸ ಆಯುರ್ವೇದಿಕ್ ಆಸ್ಪತ್ರೆಗಳನ್ನು ತೆರೆಯಬೇಕೆಂದು ಉದ್ದೇಶಿಸಲಾಗಿದೆ;

ಆ) ಮಲಪ್ರಭಾ ಮುಳುಗಡೆ ಪ್ರದೇಶದ ಪುನರ್ವಸತಿ ಕೇಂದ್ರಗಳಾದ ಬೆಳಗಾವಿ ಜಿಲ್ಲೆ ಬೈಲಹೊಂಗಲ ತಾಲ್ಲೂಕಿನ ಕೊರವಿಕೊಪ್ಪ ಹಾಗೂ ಬೈಲವಾಡ ಗ್ರಾಮಗಳಲ್ಲಿ ಮಲಪ್ರಭಾ ಮುಳುಗಡೆ ಪ್ರದೇಶದ ಜನರ ಅನುಕೂಲತೆಗಾಗಿ ಆಯುರ್ವೇದಿಕ್ ಆಸ್ಪತ್ರೆಯನ್ನು ಪ್ರಾರಂಭಿಸಲು ಕ್ರಮ ಕೈಗೊಳ್ಳಲಾಗುವುದು?

ಶ್ರೀಮತಿ ನಫೀಸ್ ಫಜಲ್ (ವಿಜ್ಞಾನ ಮತ್ತು ತಂತ್ರಜ್ಞಾನ ಹಾಗೂ ಭಾರತೀಯ ವೈದ್ಯ ಪದ್ಧತಿ ಮತ್ತು ಹೋಮಿಯೋಪತಿ ರಾಜ್ಯ ಸಚಿವರು):

ಅ) ಆಯವ್ಯಯದ ಲಭ್ಯತೆ ಮೇರೆಗೆ ಪರಿಶೀಲಿಸಲಾಗುವುದು.

ಆ) ಬೆಳಗಾವಿ ಜಿಲ್ಲಾ ಪಂಚಾಯತ್ ಯೋಜನೆಯಡಿ 2003–04ರ ಸಾಲಿನಲ್ಲಿ ಆಯವ್ಯಯ ಮತ್ತು ಉಚಿತ ಕಟ್ಟಡ ಒದಗಿಸಿ ಜಿಲ್ಲಾ ಪಂಚಾಯತ್‌ನ ಶಿಕ್ಷಣ ಮತ್ತು ಆರೋಗ್ಯ ಸ್ಥಾಯಿ ಸಮಿತಿ ಅನುಮೋದನೆಯೊಂದಿಗೆ ಪ್ರಸ್ತಾವನೆ ಸಲ್ಲಿಸಿದಲ್ಲಿ ಕೊರವಿಕೊಪ್ಪ ಹಾಗೂ ಬೈಲವಾಡ ಗ್ರಾಮಗಳಲ್ಲಿ ಆಯುರ್ವೇದ ಚಿಕಿತ್ಸಾಲಯ ತೆರೆಯಲು ಕ್ರಮ ಕೈಗೊಳ್ಳಲಾಗುವುದು.

ಮೈಸೂರಿನ ಕೆ.ಆರ್. ಆಸ್ಪತ್ರೆ ಹಾಗೂ ಬೆಂಗಳೂರಿನ ಬೌರಿಂಗ್ ಲೇಡಿ ಕರ್ಜನ್ ಆಸ್ಪತ್ರೆಗಳಲ್ಲಿ ಹೃದಯ ರೋಗ ತಜ್ಞರ ಹುದ್ದೆಗಳ ಭರ್ತಿ

3556 (4075) ಶ್ರೀ ಎ.ಆರ್. ಕೃಷ್ಣಮೂರ್ತಿ (ಸಂತೇಮರಳ್ಳಿ) : ಮಾನ್ಯ ವೈದ್ಯಕೀಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಮೈಸೂರು ಕೆ.ಆರ್. ಆಸ್ಪತ್ರೆ ಹಾಗೂ ಬೆಂಗಳೂರು ಬೌರಿಂಗ್ ಲೇಡಿ ಕರ್ಜನ್ ಆಸ್ಪತ್ರೆಯಲ್ಲಿ ಹೃದಯರೋಗ ತಜ್ಞರು: ಪ್ರಾಧ್ಯಾಪಕರು : ಉಪ ಪ್ರಾಧ್ಯಾಪಕರುಗಳ ಹುದ್ದೆಗಳ ಸಂಖ್ಯೆ ಎಷ್ಟು: ಸದರಿ ಹುದ್ದೆಗಳನ್ನು ತುಂಬಲಾಗಿದೆಯೇ; ಇಲ್ಲದಿದ್ದಲ್ಲಿ, ಸದರಿ ಹುದ್ದೆಗಳಿಗೆ ಯಾವ ರೀತಿಯ ಬದಲಿ ವ್ಯವಸ್ಥೆಯನ್ನು ಕಲ್ಪಿಸಲಾಗಿದೆಯೇ;

ಆ) ಈ ಹುದ್ದೆಗಳಲ್ಲಿ ಯಾರು ಯಾರು ಎಷ್ಟು ವರ್ಷಗಳಿಂದ ಎರವಲು ಸೇವೆಯ ಮೇಲೆ ಕರ್ತವ್ಯ ನಿರ್ವಹಿಸುತ್ತಿದ್ದಾರೆ, ಅದರ ಮೂಲ ಸ್ಥಳ ಯಾವುದು;

ಇ) ಅವರುಗಳು ಅವರ ಸೇವಾ ಅವಧಿಯಲ್ಲಿ ಯಾವ ಯಾವ ಹಂತದಲ್ಲಿ ಎಷ್ಟೆಷ್ಟು ಅವಧಿಯವರೆಗೆ ಎರವಲು ಸೇವೆಯ ಮೇಲೆ ಕರ್ತವ್ಯ ನಿರ್ವಹಿಸಿರುತ್ತಾರೆ;

ಈ) ಎರವಲು ಸೇವೆ ಸಲ್ಲಿಸಲು ಸರ್ಕಾರ ನಿಗಧಿಪಡಿಸಿರುವ ಮಾನದಂಡವೇನು; ಮೇಲ್ಕಂಡವರುಗಳ ಎರವಲು ಸೇವಾ ಅವಧಿಯಿಂದ ಸರ್ಕಾರಿ ಮಾನದಂಡ ಉಲ್ಲಂಘನೆ ಆಗಿದೆಯೇ; ಹಾಗಿದ್ದಲ್ಲಿ, ಯಾರ ಎರವಲು ಸೇವೆಯಿಂದ ಮಾನದಂಡ ಉಲ್ಲಂಘನೆಯಾಗಿರುತ್ತದೆ; ಈ ವಿಷಯದಲ್ಲಿ ಸರ್ಕಾರ ಕೈಗೊಳ್ಳಬಹುದಾದ ಕ್ರಮವೇನು;

ಉ) ಹೃದಯರೋಗ ತಜ್ಞರು ಪ್ರಾಧ್ಯಾಪಕರು ಹಾಗೂ ಉಪ ಪ್ರಾಧ್ಯಾಪಕರು ಅಗತ್ಯ ಸಂಖ್ಯೆಯಲ್ಲಿ ಇಲ್ಲದಿರುವುದರಿಂದ ವೈದ್ಯಕೀಯ ವಿದ್ಯಾರ್ಥಿಗಳು ಹಾಗೂ ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಅನಾನುಕೂಲವಾಗುವುದಿಲ್ಲವೆ; ಹಾಗಿದ್ದಲ್ಲಿ, ಇದನ್ನು ಸರಿದೂಗಿಸಲು ಸರ್ಕಾರ ಕೈಗೊಂಡಿರುವ ಕ್ರಮವೇನು?

ಡಾ॥ ಎ.ಬಿ. ಮಾಲಕರೆಡ್ಡಿ (ವೈದ್ಯಕೀಯ ಶಿಕ್ಷಣ ಸಚಿವರು):

ಅ) ಮೈಸೂರಿನ ಕೆ.ಆರ್. ಆಸ್ಪತ್ರೆಯ ಪ್ರಾಧ್ಯಾಪಕರ: ಉಪ ಪ್ರಾಧ್ಯಾಪಕರ : ಉಪನ್ಯಾಸಕರ ಹುದ್ದೆಗಳ ವಿವರ ಈ ಕೆಳಕಂಡಂತಿದೆ: